All India Radio: Bangalore
Regional Bulletin In Kannada
13.09.2026 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸುಧಾರಿತ ತಂತ್ರಜ್ಞಾನದ ಬಲದೊಂದಿಗೆ ನವೀನ ಆವಿಷ್ಕಾರಗಳಲ್ಲಿ ರಾಜ್ಯ ಮುಂಚೂಣಿ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಬೆಂಗಳೂರು ಶೀಘ್ರವೇ ದೇಶದ ಅತಿದೊಡ್ಡ ನವೋದ್ಯಮ ಕೇಂದ್ರವಾಗುವ ಹೊಸ್ತಿಲಲ್ಲಿದೆ - ಸಚಿವ ಪ್ರಿಯಾಂಕ್ ಖರ್ಗೆ
- ರಾಜ್ಯಾದ್ಯಂತ ಗಣೇಶ ಹಬ್ಬ ಆಚರಣೆಗೆ ಸಕಲ ಸಿದ್ಧತೆ ; ಪರಿಸರ ಸ್ನೇಹಿ ಮೂರ್ತಿಗಳ ಬಳಕೆಗೆ ಸಲಹೆ
- ಗಣೇಶೋತ್ಸವ ಸಮಿತಿಯ ಯುವಕರಿಗೆ ಬೆದರಿಕೆಯೊಡ್ಡಿದ ಆರೋಪದ ಇನ್ಸ್‌ಪೆಕ್ಟರ್ ಅಮಾನತ್ತಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹ

<><><><>

ಸುಧಾರಿತ ತಂತ್ರಜ್ಞಾನ ಹಾಗೂ ನುರಿತ ಮಾನವ ಸಂಪನ್ಮೂಲದ ಬಲದೊಂದಿಗೆ ರಾಜ್ಯ ನವೀನ ಆವಿಷ್ಕಾರಗಳಲ್ಲಿ ತನ್ನ ಮುಂಚೂಣಿ ಸ್ಥಾನವನ್ನು ಕಾಯ್ದುಕೊಂಡಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯವನ್ನು ಜಾಗತಿಕ ಕೃತಕ ಬುದ್ಧಿಮತ್ತೆ ಕೇಂದ್ರವಾಗಿ ರೂಪಿಸುವ ನಿಟ್ಟಿನಲ್ಲಿ ಬೆಂಗಳೂರಿನಲ್ಲಿ ೧೦೦ ಎಕರೆ ಪ್ರದೇಶದಲ್ಲಿ ಭಾರತದ ಮೊದಲ ಸರ್ಕಾರಿ ಪ್ರಾಯೋಜಿತ ಎಐ ವಿಶ್ವವಿದ್ಯಾಲಯ ಸ್ಥಾಪಿಸಲಾಗುತ್ತಿದ್ದು, ಕಲಬುರಗಿ, ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಮಂಗಳೂರು ಹಾಗೂ ಮೈಸೂರಿನಲ್ಲೂ ಇದರ ಶಾಖೆಗಳು ಆರಂಭವಾಗಲಿವೆ ಎಂದಿದ್ದಾರೆ. ಕರಾವಳಿ ಹಾಗೂ ಬೆಂಗಳೂರು ಸಮೀಪ ಅತ್ಯಾಧುನಿಕ ಹಸಿರು ದತ್ತಾಂಶ ಕೇಂದ್ರಗಳು ಹಾಗೂ ಡ್ರೋನ್ ತಂತ್ರಜ್ಞಾನ ಸಂಶೋಧನೆ ಹಾಗೂ ಪರೀಕ್ಷೆಗೆ ಡ್ರೋನ್ ಉತ್ಕೃಷ್ಟತಾ ಕೇಂದ್ರ ಸ್ಥಾಪಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರು ದೇಶದ ಯೂನಿಕಾರ್ನ್ ರಾಜಧಾನಿ ಮಾತ್ರವಲ್ಲದೇ ಶತಕೋಟಿ ಡಾಲರ್ ಮೌಲ್ಯ ತಲುಪಲಿರುವ ಸೂನಿಕಾರ್ನ್ ನವೋದ್ಯಮಗಳ ಪ್ರಮುಖ ಕೇಂದ್ರವಾಗಿ ಹೊರಹೊಮ್ಮಿದೆ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು ದೇಶದ ೧೩೩ ಯೂನಿಕಾರ್ನ್‌ಗಳಲ್ಲಿ ೫೫ ಸಂಸ್ಥೆಗಳು ಬೆಂಗಳೂರಿನಲ್ಲಿಯೇ ಕಾರ್ಯ ನಿರ್ವಹಿಸುತ್ತಿದ್ದು, ಜಾಗತಿಕವಾಗಿ ನಗರ ೫ನೇ ಅತಿದೊಡ್ಡ ಯೂನಿಕಾರ್ನ್ ಕೇಂದ್ರ ಎನಿಸಿಕೊಂಡಿದೆ ಎಂದಿದ್ದಾರೆ. ದೇಶದ ಒಟ್ಟು ೧೫೮ ಸೂನಿಕಾರ್ನ್‌ಗಳಲ್ಲಿ ೫೮ ಸಂಸ್ಥೆಗಳು ಬೆಂಗಳೂರಿನಲ್ಲಿದ್ದು, ದೆಹಲಿ, ಮುಂಬೈನಂತಹ ನಗರಗಳನ್ನು ಹಿಂದಿಕ್ಕಿ ಅಗ್ರಸ್ಥಾನದಲ್ಲಿದೆ. ಫಿನ್‌ಟೆಕ್, ಕೃತಕಬುದ್ಧಿಮತ್ತೆ ಹಾಗೂ ಕೃಷಿ ತಂತ್ರಜ್ಞಾನಗಳಂತಹ ಕ್ಷೇತ್ರಗಳಲ್ಲಿ ನವೋದ್ಯಮಗಳು ಕ್ಷಿಪ್ರವಾಗಿ ಬೆಳೆಯುತ್ತಿವೆ. ಸರ್ಕಾರದ ಸೂಕ್ತ ನೀತಿಗಳು ಹಾಗೂ ತಾಂತ್ರಿಕ ಸಾಮರ್ಥ್ಯದ ಬಲದಿಂದಾಗಿ ಅಮೆರಿಕ, ಯೂರೋಪ್ ಮತ್ತು ಚೀನಾ ಹೊರತುಪಡಿಸಿದರೆ ಬೆಂಗಳೂರು ಜಗತ್ತಿನ ಅತಿದೊಡ್ಡ ನವೋದ್ಯಮ ಕೇಂದ್ರವಾಗಿ ಹೊರಹೊಮ್ಮಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

<><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ಸಮ್ಮುಖದಲ್ಲಿ ಬಿಜೆಪಿ ಮಾಜಿ ಶಾಸಕ ನೆ.ಲ.ನರೇಂದ್ರ ಬಾಬು ನಿನ್ನೆ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡಿದ್ದಾರೆ. ಸಚಿವ ರಾಮಲಿಂಗಾರೆಡ್ಡಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್ ಎಂ ರೇವಣ್ಣ, ಮಾಜಿ ಸಚಿವೆ ರಾಣಿ ಸತೀಶ್, ಕೆಪಿಸಿಸಿ ಮಾಧ್ಯಮ ವಿಭಾಗದ ಅಧ್ಯಕ್ಷ ರಮೇಶ್ ಬಾಬು, ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಹನುಮಂತರಾಯಪ್ಪ, ಮಾಜಿ ಮೇಯರ್ ರಮೇಶ್ ಮತ್ತಿತರರ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><>

ರಾಜ್ಯಾದ್ಯಂತ ಗೌರಿ-ಗಣೇಶ ಹಬ್ಬದ ಆಚರಣೆಗೆ ಸಕಲ ಸಿದ್ಧತೆಗಳು ಭರದಿಂದ ಸಾಗಿದ್ದು, ವಿವಿಧ ಜಿಲ್ಲೆಗಳಲ್ಲಿ ಅಗತ್ಯ ಭದ್ರತಾ ಕ್ರಮ, ಪೊಲೀಸ್ ಬಂದೋಬಸ್ತ್, ಅಗತ್ಯ ಪೂಜಾ ಸಾಮಗ್ರಿಗಳ ಖರೀದಿ, ಗಣೇಶ ಮೂರ್ತಿ ಮೆರವಣಿಗೆಗಳ ಸಿದ್ಧತೆ ಸೇರಿದಂತೆ ಹಲವು ಚಟುವಟಿಕೆಗಳು ಸಾಗಿವೆ. ಹುಬ್ಬಳ್ಳಿ-ಧಾರವಾಡದಲ್ಲಿ ನಾಳೆಯಿಂದ, ನಡೆಯಲಿರುವ ಗಣೇಶೋತ್ಸವ ಶಾಂತಿಯುತ, ಸುರಕ್ಷಿತ

ಹಾಗೂ ಸಂಭ್ರಮದಿಂದ ಆಚರಿಸಲು ನಗರ ಪೊಲೀಸ್ ಇಲಾಖೆಯಿಂದ ವ್ಯಾಪಕ ಭದ್ರತೆ ಮತ್ತು ಸಾರ್ವಜನಿಕ ಸುರಕ್ಷತಾ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸ್ ಆಯುಕ್ತ ಭೂಷಣ್ ಬೋರಸೆ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ಭದ್ರತೆಯ ಭಾಗವಾಗಿ ೫೦೦ ಗೃಹರಕ್ಷಕ ಸಿಬ್ಬಂದಿ, ೮ ಕಾಯ್ದಿರಿಸಿದ ಪೊಲೀಸ್ ಪಡೆ, ೧೬ ಕೆ.ಎಸ್.ಆರ್.ಪಿ ತುಕಡಿಗಳು ಹಾಗೂ ಕ್ಷಿಪ್ರ ಕಾರ್ಯಾಚರಣೆ ಪಡೆಯ ಒಂದು ಕಂಪನಿಯನ್ನು ನಿಯೋಜಿಸಲಾಗಿದೆ ಎಂದಿದ್ದಾರೆ.

ಧ್ವನಿ : ಭೂಷಣ್ ಬೋರಸೆ  ಪೊಲೀಸ್ ಆಯುಕ್ತ

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಗೌರಿ ಗಣೇಶ ಹಬ್ಬಕ್ಕೆ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ಇದರ ಅಂಗವಾಗಿ ಇಂದು ಸ್ವರ್ಣಗೌರಿ ವ್ರತಾಚರಣೆ ಕೈಗೊಂಡಿದ್ದಾರೆ. ದೇವಾಲಯಗಳಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ. ಈ ಬಾರಿ ಸ್ವರ್ಣಗೌರಿ ವ್ರತ ಹಾಗೂ ಗಣೇಶ ಚತುರ್ಥಿ ನಾಳೆ ಆಚರಣೆ ಮಾಡಲಾಗುತ್ತಿದ್ದು, ಶ್ರದ್ಧಾಳುಗಳು ಮನೆಗಳನ್ನು ತಳಿರು ತೋರಣಗಳಿಂದ ಸಿಂಗರಿಸಲಾಗುತ್ತಿದ್ದು, ಮಂಟಪದಲ್ಲಿ ಗೌರಿಯ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿ, ಸುಮಂಗಲಿಯರಿಗೆ ಬಾಗಿನ ನೀಡುವುದು ಹಬ್ಬದ ಪ್ರಮುಖ ಆಚರಣೆಯಾಗಿದೆ. ಗಣೇಶನ ಚತುರ್ಥಿ ಅಂಗವಾಗಿ ನಾಳೆಯಿಂದ ಹಬ್ಬ ಆಚರಿಸಲು ಬಳ್ಳಾರಿ ನಗರದ ಐದು ನೂರಕ್ಕೂ ಹೆಚ್ಚು ಕಡೆ ಗಣೇಶನ ಪ್ರತಿಷ್ಠಾಪನೆಗೆ ಜನತೆ ಮುಂದಾಗಿದ್ದಾರೆ. ಇಲ್ಲಿನ ಗಾಂಧಿನಗರ ಠಾಣೆಯ ಆವರಣದಲ್ಲಿ ಗಣೇಶನನ್ನು ಪ್ರತಿಷ್ಠಾಪಿಸಲು ಏಕ ಗವಾಕ್ಷಿಯಡಿ ಮಹಾನಗರ ಪಾಲಿಕೆ, ವಿದ್ಯುತ್ ಹಾಗೂ ಪೊಲೀಸ್ ಇಲಾಖೆಯಿಂದ ಅನುಮತಿ ನೀಡಲಾಗುತ್ತಿದೆ. ಗಣೇಶನ ಪ್ರತಿಷ್ಠಾಪಿಸಿದ ಪ್ರಮುಖ ತಾಣಗಳಿಗೆ ಪೊಲೀಸ್, ಕೆಲವಡೆ ಹೋಮ್ ಗಾರ್ಡ್‌ಗಳನ್ನು ನೇಮಕ ಮಾಡಲಾಗುತ್ತಿದೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ಹಬ್ಬ-ಹರಿದಿನಗಳ ಆಚರಣೆಯಲ್ಲಿ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡುವ ಮೂಲಕ ಗಣೇಶೋತ್ಸವದಲ್ಲಿ ಪರಿಸರ ಸ್ನೇಹಿ ಮಣ್ಣಿನ ಮೂರ್ತಿಗಳನ್ನೇ ಪ್ರತಿಷ್ಠಾಪಿಸುವಂತೆ ಯಾದಗಿರಿ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶ ಮರುಳಸಿದ್ದಾರಾಧ್ಯ ಎಚ್.ಜೆ. ಕರೆ ನೀಡಿದ್ದಾರೆ. ಯಾದಗಿರಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಅವರು, ಗಣೇಶೋತ್ಸವದ ಸಂದರ್ಭದಲ್ಲಿ ಪರಿಸರದ ಮೇಲೆ ದುಷ್ಪರಿಣಾಮ ಬೀರುವ ಪಿಒಪಿ ಹಾಗೂ ರಾಸಾಯನಿಕ ಬಣ್ಣಗಳ ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಬೇಕು ಎಂದರು.

<><><><>

ಮೈಸೂರು ಜಿಲ್ಲೆಯ ಟಿ-ನರಸೀಪುರದಲ್ಲಿ ಗಣೇಶೋತ್ಸವ ಸಮಿತಿಯ ಯುವಕರಿಗೆ ಬೆದರಿಕೆ ಹಾಕಿದ ಆರೋಪ ಹೊಂದಿರುವ ಪೊಲೀಸ್ ಅಧಿಕಾರಿಯನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿರುವ ಸಚಿವರು, ಸ್ವದೇಶದಲ್ಲಿ ಭಕ್ತಿಭಾವದಿಂದ ಗಣೇಶೋತ್ಸವ ಆಚರಿಸಲು ಹಿಂದೂಗಳು ಗೊಗರೆಯುವಂತಾಗಿರುವುದು ದುರ್ದೈವದ ಸಂಗತಿಯಾಗಿದೆ ಎಂದಿದ್ದಾರೆ. ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಬೇಕಾದ ಅಧಿಕಾರಿಯೇ ಬೆದರಿಕೆ ಒಡ್ಡಿರುವುದು ಅಕ್ಷಮ್ಯ ಅಪರಾಧವಾಗಿದ್ದು, ಇದು ಸರ್ಕಾರದ ತುಷ್ಟೀಕರಣ ರಾಜಕಾರಣದ ಪರಿಣಾಮ ಎಂದು ಅವರು ಆರೋಪಿಸಿದ್ದಾರೆ. ಇದೇ ವಿಷಯಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ, ಪೊಲೀಸ್ ಅಧಿಕಾರಿಯೊಬ್ಬರು ಗಣೇಶ ಮೆರವಣಿಗೆ ಕುರಿತು ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿರುವುದು ಅತ್ಯಂತ ಖಂಡನೀಯ ಎಂದಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಪೊಲೀಸರ ಕರ್ತವ್ಯವಾಗಿದ್ದು, ಇಲಾಖೆಯಿಂದಲೇ ಬೆದರಿಕೆ ಹಾಕಿರುವುದು ಸ್ವೀಕಾರಾರ್ಹವಲ್ಲ ಎಂದಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಅಹಿತಕರ ಘಟನೆಗಳಾಗದಂತೆ ಮುಂಜಾಗ್ರತಾ ಕ್ರಮವಾಗಿ ಅನುಮತಿ ನೀಡಲಾದ ಮಾರ್ಗದಂತೆಯೇ ಮೆರವಣಿಗೆ ಸಾಗಬೇಕು ಎಂಬ ಪೊಲೀಸರ ನಿರ್ದೇಶನವನ್ನೇ ಬಿಜೆಪಿ ಪಕ್ಷ ರಾಜಕಾರಣವಾಗಿ ಬಳಸುತ್ತಿದೆ ಎಂದು ಟೀಕಿಸಿದ್ದಾರೆ.

<><><><>

ಬೆಂಗಳೂರು ನಗರ ಪೊಲೀಸ್ ಆಯುಕ್ತರ ಕಚೇರಿ ವ್ಯಾಪ್ತಿಯಲ್ಲಿ ಪೊಲೀಸ್ ಹಾಗೂ ಕಾರ್ಮಿಕ ಇಲಾಖೆ ಅಧಿಕಾರಿಗಳ ವಿಶೇಷ ತಂಡಗಳು ಅನಿರೀಕ್ಷಿತ ದಾಳಿ ನಡೆಸಿ ಒಟ್ಟು ೫೨೯ ಬಾಲ ಕಾರ್ಮಿಕರನ್ನು ರಕ್ಷಿಸಿವೆ. ಠಾಣಾ ವ್ಯಾಪ್ತಿಯ ವಾಣಿಜ್ಯ ಸಂಕೀರ್ಣಗಳು ಕೈಗಾರಿಕಾ ಪ್ರದೇಶ ಸೇರಿದಂತೆ ಒಟ್ಟು ೬ ಸಾವಿರದ ೭೬ ಸ್ಥಳಗಳಲ್ಲಿ ತಪಾಸಣೆ ನಡೆಸಲಾಗಿದೆ. ಇದರ ಭಾಗವಾಗಿ ಬಾಲ ಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ಅಂಗಡಿ ಹಾಗೂ ಉದ್ದಿಮೆಗಳ ಮಾಲೀಕರ ವಿರುದ್ಧ ಬಾಲ ಕಾರ್ಮಿಕ ನಿಷೇಧ ಕಾಯ್ದೆ ಮತ್ತು ಬಾಲ ನ್ಯಾಯಕಾಯ್ದೆಯಡಿ ನಗರದ ವಿವಿಧ ಠಾಣೆಗಳಲ್ಲಿ ಒಟ್ಟು ೧೦೫ ಪ್ರಕರಣಗಳನ್ನು ದಾಖಲಿಸಲಾಗಿದೆ.

<><><><>

ಕಾವೇರಿ ನೀರು ನಿಯಂತ್ರಣ ಮಂಡಳಿ ಸೂಚನೆಯಂತೆ ತಮಿಳುನಾಡಿಗೆ ನಿತ್ಯ ಆರರಿಂದ ಏಳು ಸಾವಿರ ಕ್ಯೂಸೆಕ್ ನೀರನ್ನು ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಡ್ಯಾಂನಿಂದ ಹರಿಬಿಡುತ್ತಿರುವ ಹಿನ್ನಲೆಯಲ್ಲಿ ನೀರಿನ ಹೊರ ಹರಿವು ಹೆಚ್ಚಳವಾಗಿರುವುದರಿಂದ ನದಿಯ ನಡುಗಡ್ಡೆಯಲ್ಲಿ ಸಿಲುಕಿದ್ದ ಇಬ್ಬರು ದನಗಾಹಿಗಳು ಹಾಗೂ ಜಾನುವಾರುಗಳನ್ನು ಅಗ್ನಿ ಶಾಮಕ ಸಿಬ್ಬಂದಿ ರಕ್ಷಿಸಿದ್ದಾರೆ. ನಾಳೆ ಸುಪ್ರೀಂ ಕೋರ್ಟ್‌ನಲ್ಲಿ ಕಾವೇರಿ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ವಿಚಾರಣೆ ಇರುವುದರಿಂದ ಕೋರ್ಟ್‌ನಲ್ಲಿ ನ್ಯಾಯಾಂಗ ನಿಂದನೆಯಾಗಬಾರದೆಂಬ ಕಾರಣಕ್ಕೆ ನಿನ್ನೆ ದಿಢೀರನೇ ನೀರು ಬಿಟ್ಟ ಪರಿಣಾಮ ಕಾವೇರಿ ನದಿ ತಟದಲ್ಲಿ ಪ್ರವಾಹದ ಭೀತಿ ಎದುರಾಗಿದೆ. ಈ ಹಿನ್ನಲೆಯಲ್ಲಿ ಇಬ್ಬರು ದನಗಾಹಿಗಳನ್ನು ರಕ್ಷಿಸಲಾಗಿದೆ. ಜೊತೆಗೆ ಕಾವೇರಿ ನದಿಪಾತ್ರದ ಜನರು ಸುರಕ್ಷಿತ ಸ್ಥಳಕ್ಕೆ ಹೋಗುವಂತೆ ಮನವಿ ಮಾಡಲಾಗಿದೆ.

<><><><>

ಉತ್ತರ ಕನ್ನಡ ಜಿಲ್ಲೆಯ ಕರಾವಳಿ ಭಾಗದಲ್ಲಿ ಸ್ವೆಲ್ ಸರ್ಜ್ ಅಂದರೆ ಅಸಹಜ ಸಮುದ್ರ ಅಲೆಗಳ ಏರಿಕೆ ಉಂಟಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಎಚ್ಚರಿಕೆ ನೀಡಲಾಗಿದೆ. ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವಾ ಕೇಂದ್ರದ ಮುನ್ಸೂಚನೆಯಂತೆ, ಮಾಜಾಳಿ- ಭಟ್ಕಳ ನಡುವಿನ ಉತ್ತರ ಕನ್ನಡ ಕರಾವಳಿಯಲ್ಲಿ ಇಂದು ರಾತ್ರಿ ೮.೩೦ರವರೆಗೆ ಸ್ವೆಲ್ ಸರ್ಜ್ ಅಲೆಗಳ ಸಾಧ್ಯತೆ ಇದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>